**<u>ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ</u>**

**<u>ಸಿ.ಸಿ.1073/2025</u>**

| | | |
|---|---|---|
| ಸಾಕ್ಷಿದಾರರ ಹೆಸರು | : ಸುಧಾಕರ್ | ಪ್ರಾಸಾ-1 |
| ತಂದೆಯ ಹೆಸರು | : ರಾಜು | ಚಾಸಾ-2 |
| ವಯಸ್ಸು | : 34 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ಚಾಲಕ | ದಿನಾಂಕಃ 08.09.2025 |
| ವಾಸಸ್ಥಳ | : ಕಲ್ಲಾಟ ಗುಡ್ಡ | |

**<u>:ಮುಖ್ಯ ವಿಚಾರಣೆ ಪ್ರಾಜ್ಞ್ಯಾ ಸ.ಸ.ಅ. ರವರಿಂದ:</u>**

ನ್ಯಾಯಾಲಯದ ಮುಂದಿರುವ ಆರೋಪಿಯ ಪರಿಚಯ ನನಗಿದೆ. ಚಾಸಾ-3 ರವರ ಪರಿಚಯ ನನಗಿದೆ.

ಸಾಕ್ಷಿಯು ದಿ.13.03.2025 ರಂದು ಬರೆಯಲಾದ ಮಹಜರ್ ನಲ್ಲಿ ತಮ್ಮ ಸಹಿಯನ್ನು ಗುರುತಿಸಿದ್ದು, ಸದರಿ ಮಹಜರ್ ಪ್ರತಿಯನ್ನು ನಿಪಿ-1 ಮತ್ತು ಸಾಕ್ಷಿಯು ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ಕಚ್ಚಾ ನಕಾಶೆಯನ್ನು ಮತ್ತು ಅದರಲ್ಲಿರುವ ಸಾಕ್ಷಿಯು ಸಹಿಯನ್ನು ನೋಡಿ ಗುರುತಿಸಿದ್ದು, ಸದರಿ ನಕಾಶೆಯನ್ನು ನಿಪಿ-2, ಸಾಕ್ಷಿಯು ಸಹಿಯನ್ನು ನಿಪಿ-2(ಎ) ಎಂದು ಗುರುತಿಸಲಾಯಿತು. ದಿ.13.03.2025 ರಂದು ಸ್ವತ್ತು ಸ್ವೀಕೃತಿ ಸಮಯದಲ್ಲಿ ಸ್ವತ್ತು ಸ್ವೀಕೃತಿ ಪ್ರತಿಗೆ ಸಹಿ ಮಾಡಿರುವುದನ್ನು ನೋಡಿ ಗುರುತಿಸಿದ್ದು, ಸದರಿ ಪ್ರತಿಯನ್ನು ನಿಪಿ-3, ಸಾಕ್ಷಿಯು ಸಹಿಯನ್ನು ನಿಪಿ-3(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ಶೋಧನಾ ಸಮುಚ್ಚಿತ ಆಧಾರದ ಪತ್ರದಲ್ಲಿ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಸದರಿ ಪ್ರತಿಯನ್ನು ನಿಪಿ-4, ಸಾಕ್ಷಿಯು ಸಹಿಯನ್ನು ನಿಪಿ-4(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ಒಂದು ಪೋಟೋದಲ್ಲಿ ತಮ್ಮ ಇರುವಿಕೆಯ ಬಗ್ಗೆ ಗುರುತಿಸಿದ್ದು, ಸದರಿ ಪೋಟೋವನ್ನು ನಿಪಿ-5, ಸಿಡಿಯನ್ನು ನಿಪಿ-6 ಮತ್ತು ಕಲಂ 63(4)(ಸಿ) ರಡಿಯ ದೃಢೀಕೃತ ಪ್ರತಿಯನ್ನು ನಿಪಿ-7 ಎಂದು ಗುರುತಿಸಲಾಯಿತು. ಸಾಕ್ಷಿಯು ನ್ಯಾಯಾಲಯದ ಮುಂದಿರುವ ಮುದ್ದೆಮಾಲುಗಳನ್ನು ನೋಡಿ, ಮಹಜರ್ ಕಾಲದಲ್ಲಿ ವಶಪಡಿಸಿಕೊಂಡ ಮುದ್ದೆ ಮಾಲುಗಳು ಎಂದು ಗುರುತಿಸಿದ್ದು ಮತ್ತು ಅದರ ಮೇಲಿರುವ ಸಾಕ್ಷಿಯು ಸಹಿಯನ್ನು ನೋಡಿ ಗುರುತಿಸಿದ್ದು ಸದರಿ ಮುದ್ದೆ ಮಾಲುಗಳನ್ನು ಕ್ರಮವಾಗಿ ಬಿಳಿ ಪ್ಲಾಸ್ಟಿಕ್ ಚೀಲ ಎಂ.ಒ.1, ಮದ್ಯದ ಟೆಟ್ರಾ ಪ್ಯಾಕ್ ಗಳನ್ನು ಒಟ್ಟಾಗಿ ಎಂ.ಒ.2, ಪ್ಲಾಸ್ಟಿಕ್ ಕೈ ಚೀಲವನ್ನು ಎಂ.ಒ.3 ಮತ್ತು ಸಾಕ್ಷಿಯು ಸಹಿಯನ್ನು ಎಂ.ಒ.1(ಎ) ಮತ್ತು 3(ಎ) ಎಂದು ಗುರುತಿಸಲಾಯಿತು.

ಕಳೆದ 5-6 ತಿಂಗಳ ಹಿಂದೆ ನಾನು ಕಳಸ ಠಾಣೆಗೆ ನನ್ನ ಖಾಸಗಿಯ ವಿಷಯವಾಗಿ ತೆರಳಿದ್ದ ಸಮಯದಲ್ಲಿ ಪೋಲಿಸರು ಠಾಣೆಯಲ್ಲಿ ನಿಪಿ-1 ಕ್ಕೆ ಸಹಿಯನ್ನು ಪಡೆದುಕೊಂಡಿರುತ್ತಾರೆ. ಪೋಲಿಸರು ಕೇವಲ ಮಹಜರ್ ಪ್ರತಿ ಎಂದು ತಿಳಿಸಿರುತ್ತಾರೆ, ಅದರಲ್ಲಿ ಯಾವ ಅಂಶಗಳನ್ನು ಬರೆಯಲಾಗಿದೆ ಎಂದು ನಾನು ಕೇಳಿ ತಿಳಿದುಕೊಂಡಿರುವುದಿಲ್ಲ ಮತ್ತು ಪೋಲಿಸರು ನನಗೆ

ತಿಳಿಸಿರುವುದಿಲ್ಲ. ಪೋಲಿಸರು ನನ್ನ ಸಮಕ್ಷಮ ಏನನ್ನು ವಶಕ್ಕೆ ಪಡೆದಿಲ್ಲ. ಆ ದಿನ ಎಂ.ಒ.1 ರಿಂದ 3 ರ ವಸ್ತುಗಳು ಹಾಜರಿರುವುದಿಲ್ಲ. ನಾನು ಸಹಿ ಮಾಡುವಾಗ ಸಮಯ ಸುಮಾರು ಸ.7.00 ರ ಸಮಯವಾಗಿರುತ್ತದೆ. ನನ್ನೊಟ್ಟಿಗೆ ಇತರರು ಯಾರು ಸಹಿ ಮಾಡಿರುತ್ತಾರೆ ಎಂದು ನನಗೆ ತಿಳಿದಿರುವುದಿಲ್ಲ. ನಿಪಿ-5 ನ್ನು ನಮ್ಮ ಮನೆಯ ಬಳಿ ತೆಗೆಯಲಾಗಿರುತ್ತದೆ. ಇದನ್ನು ಹೊರತು ಪಡಿಸಿ ನನಗೆ ಇನ್ನ್ಯಾವುದೇ ವಿಚಾರ ತಿಳಿದಿರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪ್ರಾಜ್ಞ್ಯಾ ಸ.ಅ.ಅ. ರವರು ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಿದೆ)

**ಪಾಟೀ ಸವಾಲು: ಪ್ರಾಜ್ಞ್ಯಾ ಸ.ಸ.ಅ. ರವರಿಂದ:**

ಸಾಕ್ಷಿಗೆ ದಿ.13.03.2025 ರ ತಮ್ಮ ಹೇಳಿಕೆಯನ್ನು ಸಂಪೂರ್ಣವಾಗಿ ಓದಿ ಹೇಳಲಾಗಿ ಸಾಕ್ಷಿಯು ಸದರಿ ಹೇಳಿಕೆಯನ್ನು ಸಂಪೂರ್ಣವಾಗಿ ಅಲ್ಲಗಳೆದಿರುತ್ತಾರೆ, ಆದ ಕಾರಣ ಸದರಿ ಹೇಳಿಕೆಯ ಭಾಗವನ್ನು ನಿಪಿ-6 ಎಂದು ಗುರುತಿಸಲಾಯಿತು. ನಾನು ಆರೋಪಿಯ ಅಂಗಡಿಯನ್ನು ಪರಿಶೀಲಿಸಿ ಪೋಲಿಸರು ಮದ್ಯವನ್ನು ವಶಪಡಿಸಿಕೊಂಡ ಬಾಬ್ತು ನಿಪಿ-1 ಕ್ಕೆ ಸಹಿ ಮಾಡಿರುವ ಬಗ್ಗೆ ತಿಳಿದಿದ್ದರೂ ಸಹಾ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು: ಆರೋಪಿ ಪರ ವಕೀಲರು ಇಲ್ಲ ಎಂದು ತಿಳಿಸಿರುತ್ತಾರೆ.**
**ಮರು ವಿಚಾರಣೆ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.